ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಕೋವಿಡ-19ಕ್ಕೆ ಬಲಿಯಾಗಿರುವವರ ಕುರಿತು

ಶ್ರೀ ಆರ್. ಪ್ರಸನ್ನಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

85 (53) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಕೋವಿಡ್-19ಗೆ ಬಲಿಯಾಗಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈಗಾಗಲೇ ಕೋವಿಡ್-19 ಕಾಯಿಲೆಗೆ ಗುರಿಯಾಗಿರುವವರ ಸಂಖ್ಯೆ ಎಷ್ಟು; (ಕಾಯಿಲೆಯಿಂದ ಗುಣಮುಖರಾದವರ ಜಿಲ್ಲಾವಾರು ವಿವರ ನೀಡುವುದು);

(ಇ) ಖಾಸಗಿ ಆಸ್ಪತ್ರೆಗಳಲ್ಲಿ ಕರೋನ ರೋಗಕ್ಕೆ ಚಿಕಿತ್ಸೆ ಪಡೆದಿರುವ ರೋಗಿಗಳ ಸಂಖ್ಯೆ ಎಷ್ಟು; (ಆಸ್ಪತ್ರೆಗಳ ಹೆಸರು ಮತ್ತು ವೈದ್ಯರು, ಸಿಬ್ಬಂದಿಗಳ ಜಿಲ್ಲಾವಾರು ವಿವರ ನೀಡುವುದು)

(ಈ) ಕೋವಿಡ್-19 ನಿಯಂತ್ರಣ ಮತ್ತು ನಿರ್ವಹಣೆಗೆ ನೇಮಿಸಿದ ಅಧಿಕಾರಿ ಮತ್ತು ಪೊಲೀಸ್ ಸಿಬ್ಬಂದಿಗಳ ಜಿಲ್ಲಾವಾರು ವಿವರ ನೀಡುವುದು;

(ಉ) ಕೋವಿಡ್-19 ಸಂಬಂಧ ಖರೀದಿ ಮಾಡಿರುವ ವೆಂಟಿಲೇಟರ್ಗಳ ಸಂಖ್ಯೆ ಎಷ್ಟು; ಯಾವ ಕಂಪನಿಗಳಿಂದ ಖರೀದಿ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಊ) ಕೋವಿಡ್-19ಗೆ ಖರೀದಿ ಮಾಡಿರುವ ಮಾಸ್ಕ್ ಮತ್ತು ಪಿ.ಪಿ.ಕಿಟ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಋ) ಕರೋನ ರೋಗಕ್ಕೆ ತುತ್ತಾಗಿರುವ ರೋಗಿಗಳಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುತ್ತಿರುವ ಔಷಧಗಳ ವಿವರ ನೀಡುವುದು?